22

ಕರ್ನಾಟಕ ಸರ್ಕಾರ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ ಕೋಶ)

ಸಂಖ್ಯೆ:ಸಿಆಸುಇ:20:ಆರ್‌ಟಿಐ:2010

3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಗೋಪುರ,
ಬೆಂಗಳೂರು. ದಿನಾಂಕ:18.02.2010

## ಸುತ್ತೋಲೆ

ವಿಷಯ : ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 4 ರಡಿ ದಾಖಲೆಗಳ ನಿರ್ವಹಣೆ ಕುರಿತು.

ಉಲ್ಲೇಖ: ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : 12/192/2009-IR, ದಿನಾಂಕ : 20.01.2010.

------

ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 4 ರಡಿ ದಾಖಲೆಗಳ ನಿರ್ವಹಣೆಗೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಮಂತ್ರಾಲಯ, ಸಿಬ್ಬಂದಿ ಮತ್ತು ತರಬೇತಿ ಇಲಾಖೆಯು ಕಳುಹಿಸಿರುವ ಕಛೇರಿ ಜ್ಞಾಪನವನ್ನು ಇದರೊಂದಿಗೆ ಲಗತ್ತಿಸಿದೆ. ಕೇಂದ್ರ ಸರ್ಕಾರದ ಕಛೇರಿ ಜ್ಞಾಪನದಲ್ಲಿ ಸೂಚಿಸಿರುವಂತೆ ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 4(1) (ಎ)ರಡಿ ದಾಖಲೆಗಳನ್ನು/ಕಡತಗಳನ್ನು ವ್ಯವಸ್ಥಿತವಾಗಿ Catalogue ಮತ್ತು Index ಕಡ್ಡಾಯವಾಗಿ ಮಾಡುವಂತೆ ಸೂಚಿಸಿದೆ.

ಮಾಹಿತಿ ಹಕ್ಕು ಅಧಿನಿಯಮ 2005 ರ ಸೆಕ್ಷನ್ 4(1)(ಎ)ರನ್ವಯ ಕಡತಗಳ ಕ್ರಮಬದ್ಧ ಸೂಚಿ ಪಟ್ಟಿ ಹಾಗೂ 4(1)(ಬಿ)ರನ್ವಯ ಸ್ವಯಂ ಘೋಷಿತ ಪ್ರಕರಣೆಗಳನ್ನು ಪ್ರಕಟಿಸುವುದು ಎಲ್ಲಾ ಸಾರ್ವಜನಿಕ ಪ್ರಾಧಿಕಾರಿಗಳಿಗೆ ಕಡ್ಡಾಯವಾಗಿದೆ. ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ಬಂದು 4 ವರ್ಷಗಳಾದರೂ ಮಾಹಿತಿ ಹಕ್ಕು ಅಧಿನಿಯಮದ ಪ್ರಕರಣ 4(1)(ಎ) ಮತ್ತು 4(1)(ಬಿ)ಗಳ ಮಾಹಿತಿಯನ್ನು ಕೆಲವು ಸಾರ್ವಜನಿಕ ಪ್ರಾಧಿಕಾರಗಳು ತಯಾರಿಸದೇ ಇರುವುದು ವಿಷಾದನೀಯ.

ಆದರಿಂದ, ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ / ಇಲಾಖಾ ಮುಖ್ಯಸ್ಥರ/ ನಿಗಮ(ಮಂಡಳಿ) ಅನುದಾನಿತ ಸಂಘ ಸಂಸ್ಥೆಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳ / ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ / ಮೊದಲ ಮೇಲ್ಮನವಿ ಪ್ರಾಧಿಕಾರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮದ ಪ್ರಕರಣ 4(1)(ಎ) ಮತ್ತು 4(1)(ಬಿ)ಗಳ ಮಾಹಿತಿಯನ್ನು 30 ದಿನಗಳ ಒಳಗಾಗಿ ತಯಾರಿಸಿ ಪ್ರಕಟಪಡಿಸುವಂತೆ ಸೂಚಿಸಲು ಹಾಗೂ ಈ ಬಗ್ಗೆ ತೆಗೆದುಕೊಂಡ ಕ್ರಮವನ್ನು ಆಡಳಿತ ಇಲಾಖೆಗೆ ತಿಳಿಸುವಂತೆ ಕೋರಲಾಗಿದೆ.

ಸಚಿವಾಲಯದ ಎಲ್ಲಾ ಇಲಾಖೆಗಳು ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ ಮಾಹಿತಿಯನ್ನು ಕ್ರೂಢೀಕರಿಸಿ ದಿ:26.02.2010ರ ಒಳಗಾಗಿ ಸಿಆಸುಇ(ಜನಸ್ಪಂದನ)ಕ್ಕೆ ಒದಗಿಸುವಂತೆ ಕೋರಿದೆ.

ಲ. ವೆಂಕಟಗಿರಿಯಪ್ಪ 18/2/10

(ಲ.ವೆಂಕಟಗಿರಿಯಪ್ಪ)

ಸರ್ಕಾರದ ಅಧೀನ ಕಾರ್ಯದರ್ಶಿಗಳು,

ಸಿಆಸುಇ (ಜನಸ್ಪಂದನ ಕೋಶ- ಮಾಹಿತಿ ಹಕ್ಕು)

ಗೆ,

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು
3. ಎಲ್ಲಾ ಜಿಲ್ಲಾಧಿಕಾರಿಗಳು,
4. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
5 ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಜನಸ್ಪಂದನ) ಇವರ ಆಪ್ತ ಶಾಖೆಗೆ.
4) ಸರ್ಕಾರದ ಉಪ ಕಾರ್ಯ್ದದರ್ಶಿಗಳು, (ಆರ್‌ಟಿಐ), ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಮಂತ್ರಾಲಯ, ಸಿಬ್ಬಂದಿ ಮತ್ತು ತರಬೇತಿ ಇಲಾಖೆ, ಭಾರತ ಸರ್ಕಾರ
5) ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.

\\User1\dpar\Office Work New 24-10-2007\Office work\Right to Information Act-2010\Circulars.doc